# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಳ್ಳಾರಿ ಜಿಲ್ಲೆ ಕಂಪ್ಲಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

---

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ:ನಅಇ 332 ಟಿಟಿಪಿ 97 ದಿ: 24-11-97.
2) ಮುಖ್ಯಾಧಿಕಾರಿಗಳು, ಪುರಸಭೆ ಯೋಜನಾ ಪ್ರಾಧಿಕಾರ, ಕಂಪ್ಲಿ, ಇವರ ಪತ್ರ ಸಂಖ್ಯೆ:ಪುರಸಭೆ:ನಯೋಪ್ರಾ:ಸ್ಥೂಅಯೋ:ಅಂತಿಮ: 99-2000:651: ದಿನಾಂಕ 14-03-2000.
3) ನಗರ ಯೋಜನಾ ನಿರ್ದೇಶಕರ ಪತ್ರ ಸಂಖ್ಯೆ:ನಯೋ:ಉನಿ (ವಿ.ವಿ) ಸ್ಥೂಅಯೋ:ಕಂಪ್ಲಿ:2000-2001 ದಿನಾಂಕ 20-05-2000.

ಪ್ರಸ್ತಾವನೆ:-

ಸರ್ಕಾರದ ಅಧಿಸೂಚನೆ ಸಂಖ್ಯೆ:ಯುಡಿಡಿ 355 ಟಿಟಿಪಿ 96 ದಿನಾಂಕ 02-09-1996 ರಲ್ಲಿ ಕಂಪ್ಲಿ ಪುರಸಭೆ ವ್ಯಾಪ್ತಿಯನ್ನು ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಿ, ಸದರಿ ಪುರಸಭೆಯನ್ನು ನಗರ ಯೋಜನಾ ಪ್ರಾಧಿಕಾರವನ್ನಾಗಿ ರಚಿಸಲಾಗಿದೆ. ಮೇಲೆ ಉಲ್ಲೇಖ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕಂಪ್ಲಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯಿದೆ 1961 ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಮುಖ್ಯಾಧಿಕಾರಿಗಳು, ಪುರಸಭೆ ಯೋಜನಾ ಪ್ರಾಧಿಕಾರ, ಕಂಪ್ಲಿ ಇವರು ಕಂಪ್ಲಿ ಪಟ್ಟಣಕ್ಕೆ ತಯಾರಿಸಲಾಗಿರುವ ಸ್ಥೂಲಾಭಿವೃದ್ಧಿ ಯೋಜನೆಯನ್ನು ಸರ್ಕಾರದ ಅಂತಿಮ ಅನುಮೋದನೆಗಾಗಿ ನಗರ ಯೋಜನಾ ನಿರ್ದೇಶಕರ ಮುಖಾಂತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರ ಪತ್ರದಲ್ಲಿ ನಗರ ಯೋಜನಾ ನಿರ್ದೇಶಕರು ಸದರಿ ವಿಷಯವನ್ನು ಪರಿಶೀಲಿಸಿ ತಾತ್ಕಾಲಿಕ ಅನುಮೋದನೆಗೊಂಡ ಸ್ಥೂಲಾಭಿವೃದ್ಧಿ ಯೋಜನೆಗೆ ಸಾರ್ವಜನಿಕ ಆಕ್ಷೇಪಣೆ ಹಾಗೂ ಸಲಹೆಗಳನ್ನು ಸ್ವೀಕರಿಸಲು ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿ, ನಿಗದಿತ ಅವಧಿಯಲ್ಲಿ ಸಾರ್ವಜನಿಕರಿಂದ ಈ ಸಂಬಂಧ ಯಾವುದೇ ಸಲಹೆ : ಆಕ್ಷೇಪಣೆ ಬಂದಿರುವುದಿಲ್ಲವೆಂದು, ಹಾಗಾಗಿ ಈ ಹಿಂದೆ ಪ್ರಾಧಿಕಾರದ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ ಸ್ಥೂಲಾಭಿವೃದ್ಧಿ ಯೋಜನೆಯಲ್ಲಿ ಕೆಲವೊಂದು ಅವಶ್ಯ ಮಾರ್ಪಾಡುಗಳನ್ನು ಮಾಡುವ ಅಗತ್ಯವಿದ್ದುದರಿಂದ ಈಗಾಗಲೇ ಆಗಿರುವ ಬದಲಾವಣೆಗಳನ್ನು ದಿನಾಂಕ 16-10-99 ರಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಸದರಿ ಬದಲಾವಣೆಗಳನ್ನು ಸ್ಥೂಲಾಭಿವೃದ್ಧಿ ಯೋಜನೆಯಲ್ಲಿ ಅಳವಡಿಸಿಕೊಂಡು ಅಂತಿಮ ಅನುಮೋದನೆಗಾಗಿ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ. ಸ್ಥೂಲಾಭಿವೃದ್ಧಿ ಯೋಜನೆಯನ್ನು 2011 ನೇ ಇಸವಿಗೆ ಅಂದಾಜಿಸಲಾದ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ತಯಾರಿಸಲಾಗಿದೆ. 2011 ನೇ ಇಸವಿಗೆ ಕಂಪ್ಲಿ ಪಟ್ಟಣದ ಜನಸಂಖ್ಯೆಯು 53,000 ಎಂದು ಅಂದಾಜು ಮಾಡಲಾಗಿದೆ. ಯೋಜನೆಯಲ್ಲಿ ಅಭಿವೃದ್ಧಿಗಾಗಿ ಒಟ್ಟು 589.00 ಹೆಕ್ಟೇರ್ ಪ್ರದೇಶ ಬೇಕಾಗುವುದೆಂದು ಲೆಕ್ಕ ಹಾಕಲಾಗಿದೆ. ಈ ವಿಸ್ತೀರ್ಣದಲ್ಲಿ 333.25 ಹೆಕ್ಟೇರ (ಶೇಕಡಾ 56.57) ಪ್ರದೇಶವನ್ನು ವಸತಿಗಾಗಿ, ವಾಣಿಜ್ಯಕ್ಕಾಗಿ 18.00 ಹೆಕ್ಟೇರ್ (ಶೇಕಡಾ 3.05) ಕೈಗಾರಿಕೆಗಾಗಿ 50.00 ಹೆಕ್ಟೇರ್ (ಶೇಕಡಾ 8.49) , ಪ್ರದೇಶವನ್ನು ಕಾಯ್ದಿರಿಸಲಾಗಿದೆ. ಜೊತೆಗೆ ಸಾರ್ವಜನಿಕ : ಅರೆ ಸಾರ್ವಜನಿಕ ಹಾಗೂ ಉದ್ಯಾನವನ ಮತ್ತು ಬಯಲು ಜಾಗೆಗಳಿಗೆ ಮೀಸಲಿಡಬೇಕಾದ ಪ್ರದೇಶವನ್ನು ಪಟ್ಟಣದ ಬೆಳವಣಿಗೆಯ ಅಗತ್ಯಕ್ಕೆ ಅನುಗುಣವಾಗಿ ಸೂಕ್ತ ಪ್ರದೇಶಗಳಲ್ಲಿ ಕಾಯ್ದಿರಿಸಲಾಗಿದೆ. ಮುಖ್ಯ ರಸ್ತೆಗಳನ್ನು ವಿಸ್ತರಿಸಲು ಅನುಕೂಲವಾಗುವಂತೆ ಕಟ್ಟಡ ರೇಖೆಗಳನ್ನು ನಿಗದಿಪಡಿಸಲಾಗಿದೆ. ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಾದ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸ್ಥೂಲಾಭಿವೃದ್ಧಿ ಯೋಜನೆ ನಕ್ಷೆ ಹಾಗೂ ವರದಿಗಳನ್ನು ಸಾಮಾನ್ಯವಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಪರಿಚ್ಛೇದ 12 ರಲ್ಲಿ ನಿರೂಪಿಸಿರುವ ಅಂಶಗಳನ್ನು ಅನುಸರಿಸಿ ಅಂತಿಮವಾಗಿ ತಯಾರಿಸಿರುವುದನ್ನು ಗಮನಿಸಲಾಗಿದೆ. ಆದುದರಿಂದ ಕಂಪ್ಲಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯಿದೆ ಪರಿಚ್ಛೇದ 13 (3)ರ ಪ್ರಕಾರ ಅಂತಿಮ ಅನುಮೋದನೆ ನೀಡುವಂತೆ ನಗರ ಯೋಜನಾ ನಿರ್ದೇಶಕರು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 117 ಬೆಟಿಪಿ 2000, ಬೆಂಗಳೂರು ದಿನಾಂಕ 2[illegible]-7-2000

ಬಳ್ಳಾರಿ ಜಿಲ್ಲೆ ಕಂಪ್ಲಿ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯಿದೆ ಪರಿಚ್ಛೇದ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. 45

ಸಮಗ್ರಾಭಿವೃದ್ಧಿ ಯೋಜನೆಗೆ ಅಂತಿಮವಾಗಿ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ಎಲ್ಲಾ ನಕಾಶೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಹ್ಮದ್ ಎ. ಮುಖ್ತದರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

3/8/2000

ಇವರಿಗೆ:-

1) ನಗರ ಯೋಜನಾ ನಿರ್ದೇಶಕರು, ಬೆಂಗಳೂರು,
2) ಸದಸ್ಯ-ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಕಂಪ್ಲಿ,
3) ಮುಖ್ಯಾಧಿಕಾರಿ, ಪುರಸಭೆ, ಕಂಪ್ಲಿ,
4) ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು,
5) ಸರ್ಕಾರದ ಕಾರ್ಯದರ್ಶಿ-2, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಸಹಾಯಕರು,
6) ಕಾರ್ಯ ಗೆಜೆಟ್ : ರಕ್ಷಾ ಕಡತ : ಬಿಡಿ ಪ್ರತಿಗಳು.